**Bangalore**
**Regional News**
**28.09.2024 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ಅಕ್ಟೋಬರ್ ೨ ರಂದು 'ಗಾಂಧಿ ನಡಿಗೆ' ಮತ್ತು 'ಸ್ವಚ್ಛತಾ ಪ್ರತಿಜ್ಞೆ' ಆಯೋಜಿಸಲು ರಾಜ್ಯ ಸರ್ಕಾರ ನಿರ್ಧಾರ

೨. ಕೊರೋನಾ ಸಂದರ್ಭದಲ್ಲಿ ಬಡವರನ್ನು ಬದುಕಿಸಿದ್ದು ನರೇಗಾ ಮತ್ತು ಅನ್ನಭಾಗ್ಯ - ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಮತ

೩. ಕಳಂಕಿತ, ಲೋಕಾಯುಕ್ತ ಅಧಿಕಾರಿ ವಿರುದ್ಧ ಕೇಂದ್ರ ಗೃಹ ಸಚಿವಾಲಯಕ್ಕೆ ದೂರು ನೀಡಲು ಕುಮಾರಸ್ವಾಮಿ ನಿರ್ಧಾರ

೪. ಮುಡಾ ಪ್ರಕರಣವನ್ನು ಸಿಬಿಐಗೆ ವಹಿಸುವಂತೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಆಗ್ರಹ

**<><*<><>*><>**

ಮಹಾತ್ಮ ಗಾಂಧೀಜಿಯವರು ಬೆಳಗಾವಿಯಲ್ಲಿ ಸ್ವಾತಂತ್ರ್ಯ ಹೋರಾಟದ ಆಂದೋಲನ ನಡೆಸಿ ೧೦೦ ವರ್ಷಗಳು ಪೂರೈಸಿದ ನೆನಪಿಗಾಗಿ ರಾಜ್ಯ ಸರ್ಕಾರವು, ಅಕ್ಟೋಬರ್ ೨ ರಂದು ರಾಜ್ಯಾದ್ಯಂತ 'ಗಾಂಧಿ ನಡಿಗೆ' ಮತ್ತು 'ಸ್ವಚ್ಛತಾ ಪ್ರತಿಜ್ಞೆ' ಕಾರ್ಯಕ್ರಮಗಳನ್ನು ಆಯೋಜಿಸಲು ನಿರ್ಧರಿಸಿದೆ. ಮೊದಲ ಹಂತವಾಗಿ ಅಕ್ಟೋಬರ್ ೨ ರಂದು ೧ ಕಿಲೋಮೀಟರ್ 'ಗಾಂಧಿ ಪಾದಯಾತ್ರೆ' ಹಾಗೂ 'ಸ್ವಚ್ಛತಾ ಪ್ರತಿಜ್ಞೆ' ಅಭಿಯಾನ ಹಮ್ಮಿಕೊಳ್ಳಲಾಗಿದೆ. ರಾಜ್ಯಾದ್ಯಂತ ಜಿಲ್ಲೆ, ತಾಲೂಕು, ಪುರಸಭೆ ಮಟ್ಟದಲ್ಲಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಿಧಾನಸೌಧದಲ್ಲಿ ತಿಳಿಸಿದರು. ೧೯೨೪ ರಲ್ಲಿ ಬೆಳಗಾವಿಯಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ ನಡೆದ ಪ್ರಸಿದ್ಧ ಕಾಂಗ್ರೆಸ್ ಸರ್ವಸದಸ್ಯರ ಅಧಿವೇಶನವು ದೇಶದ ಸ್ವಾತಂತ್ರ್ಯ ಹೋರಾಟಕ್ಕೆ ವೇಗವನ್ನು ನೀಡಿತು ಎಂದು ಹೇಳಿದರು. ಬೆಂಗಳೂರಿನಲ್ಲಿ ಅಕ್ಟೋಬರ್ ೨ ರಂದು ಮೆರವಣಿಗೆ ನಡೆಯಲಿದ್ದು, ಬೆಳಗ್ಗೆ ೯ ಗಂಟೆಗೆ ಗಾಂಧಿ ಭವನದಿಂದ ಆರಂಭಗೊಂಡು ವಿಧಾನಸೌಧದ ಗಾಂಧಿ ಪ್ರತಿಮೆ ಬಳಿ ಅಂತ್ಯಗೊಳ್ಳಲಿದೆ ಎಂದು ಮಾಹಿತಿ ನೀಡಿದರು. ಈ ಕಾರ್ಯಕ್ರಮದಲ್ಲಿ ಭಾಗವಹಿಸಲು ಎಲ್ಲಾ ರಾಜಕೀಯ ಪಕ್ಷಗಳ ಪ್ರತಿನಿಧಿಗಳನ್ನು ಆಹ್ವಾನಿಸಲಾಗುವುದು ಎಂದು ತಿಳಿಸಿದರು.

**<><*<><>*><>**

ಸ್ವಚ್ಛತಾ ಹೀ ಸೇವಾ ಅಭಿಯಾನ ಹಿನ್ನೆಲೆ ರಾಜ್ಯದ ವಿವಿಧೆಡೆ ಸ್ವಚ್ಛತೆ ಬಗ್ಗೆ ಅರಿವು ಮೂಡಿಸುವ ಕುರಿತು ಜಾಥಾ ನಡೆಯಿತು. ಮೈಸೂರು ಜಿಲ್ಲಾ ನ್ಯಾಯಾಲಯದಲ್ಲಿ ಸ್ವಚ್ಚತಾ ಅಭಿಯಾನ ಹಮ್ಮಿಕೊಂಡಿದ್ದು ಸ್ವತಃ ನ್ಯಾಯಾಧೀಶರು ಮತ್ತು ವಕೀಲರ ತಂಡ, ಸಿಬ್ಬಂದಿಗಳು ಪೊರಕೆ ಹಿಡಿದು ಸ್ವಚ್ಚತಾ ಕಾರ್ಯ ಕೈಗೊಂಡರು. ಹಳೆ ಜಿಲ್ಲಾ ನ್ಯಾಯಾಲಯದ ಆವರಣದಲ್ಲಿ ೭ ನೇ ಸತ್ರ ಜಿಲ್ಲಾ ನ್ಯಾಯದೀಶರಾದ ಎಂ. ರಮೇಶ್ ಸ್ವಚ್ಛತೆ ಮಾಡುವ ಮೂಲಕ ಅಭಿಯಾನಕ್ಕೆ ಚಾಲನೆ ನೀಡಿದರು.

ವಿಜಯಪುರ ಮಹಾನಗರ ಪಾಲಿಕೆಯ ಪರಿಸರ ಅಭಿಯಂತರರಾದ ಅಶೋಕ್ ಕುಮಾರ್ ಸಜ್ಜನ್ 'ಸ್ವಚ್ಛತಾ ಹೀ ಸೇವಾ ಅಭಿಯಾನ'ದ ಬಗ್ಗೆ ಜಾಗೃತಿ ಮೂಡಿಸಿದರು. ಸ್ವಚ್ಛತಾ ಹೀ ಸೇವಾ ಕಾರ್ಯಕ್ರಮ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಯಶಸ್ವಿಯಾಗಿ ನಡೆಯುತ್ತಿದ್ದು, ಇಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ನಗರಸಭೆ ಸಹಯೋಗದಲ್ಲಿ ಜಿಲ್ಲಾ ನ್ಯಾಯಾಲಯದ ಆವರಣದಲ್ಲಿ ಸ್ವಚ್ಛತಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮಕ್ಕೆ ಸಸಿ ನೆಡುವ ಮೂಲಕ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ನೇರಳೆ ವೀರಭದ್ರಯ್ಯ ಭವಾನಿ ಚಾಲನೆ ನೀಡಿದರು. ಮಂಡ್ಯ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಪೊಲೀಸ್ ಇಲಾಖೆ ಸಹಯೋಗದೊಂದಿಗೆ ಸ್ವಚ್ಚತಾ ಅಭಿಯಾನ ಕಾರ್ಯಕ್ರಮ ಮಂಡ್ಯ ನಗರದ ಸಶಸ್ತ್ರ ಮೀಸಲು ಪಡೆಯ ಆವರಣದಲ್ಲಿ ನಡೆಯಿತು. ಕಾರ್ಯಕ್ರಮಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಚಾಲನೆ ನೀಡಿದರು. ಇಲಾಖೆಯ ಸಿಬ್ಬಂದಿ ಅಭಿಯಾನದಲ್ಲಿ ಪಾಲ್ಗೊಂಡಿದ್ದರು.

<><*<><>*><>

ಅನ್ನ ಭಾಗ್ಯ ಜಾರಿಗೆ ತರಲು ಅನ್ನಕ್ಕಾಗಿ ಕಾದು ನಿಂತ ಪರಿಸ್ಥಿತಿಯೇ ಕಾರಣ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಬಾಲ್ಯದ ದಿನಗಳನ್ನು ಸ್ಮರಿಸಿದ್ದಾರೆ. ಮೈಸೂರು ವಿಶ್ವವಿದ್ಯಾನಿಲಯ ಮಾನಸಗಂಗೋತ್ರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಗ್ಯಾರಂಟಿ ಯೋಜನೆಗಳು ಬಡವರ ಸುರಕ್ಷತೆ ಮತ್ತು ಕಲ್ಯಾಣ" ಕೃತಿ ಬಿಡುಗಡೆ ಮಾಡಿ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಕೇವಲ ಭಾಷಣಗಳಿಂದ ಸಮಾಜದ ಆಶಯ ಈಡೇರುವುದಿಲ್ಲ ಎಂದು ತಿಳಿಸಿದರು. ಹಬ್ಬ ಬಂದಾಗ ಮಾತ್ರ ಮನೆಯಲ್ಲಿ ಅನ್ನ ಮಾಡುತ್ತಿದ್ದು, ಹೀಗಾಗಿ ಅನ್ನಕ್ಕೆ ಯಾರೂ ಕಾಯಬಾರದು ಎನ್ನುವ ಕಾರಣಕ್ಕೆ ಅನ್ನಭಾಗ್ಯ ಜಾರಿಗೆ ತರಲಾಗಿದೆ ಎಂದು ಸ್ಮರಿಸಿದರು. ಜಾತಿ ಕಾರಣದಿಂದ ಸಮಾಜದಲ್ಲಿ ಆರ್ಥಿಕ ಅಸಮಾನತೆ ಸೃಷ್ಟಿ ಆಯಿತು. ಹೀಗಾಗಿ ಎಲ್ಲರಿಗೂ ಆರ್ಥಿಕ ಶಕ್ತಿ ನೀಡುವ ಕಾರಣಕ್ಕೆ ಎರಡನೇ ಬಾರಿ ಮುಖ್ಯಮಂತ್ರಿ ಆದ ಮೇಲೆ ಗ್ಯಾರಂಟಿಗಳ ಮೂಲಕ ಆರ್ಥಿಕ ಶಕ್ತಿ ನೀಡಿದೆವು ಎಂದರು. ಮನ್ರೇಗಾ ಮತ್ತು ಅನ್ನಭಾಗ್ಯ ಯೋಜನೆಗಳು ಕೊರೋನಾ ಸಂದರ್ಭದಲ್ಲಿ ಬಡವರನ್ನು, ಕೆಳ ಮಧ್ಯಮ ವರ್ಗದವರನ್ನು ಬದುಕಿಸಿತು ಎಂದು ಅವರು ಹೇಳಿದರು.

<><*<><>*><>

ರಾಜ್ಯ ಸರ್ಕಾರ ಭ್ರಷ್ಟ ಅಧಿಕಾರಿಗಳನ್ನು ಬಳಸಿಕೊಂಡು ತನಿಖೆ ನಡೆಸುತ್ತಿದೆ ಎಂದು ಕೇಂದ್ರ ಉಕ್ಕು ಮತ್ತು ಗಣಿ ಖಾತೆ ಸಚಿವ ಎಚ್.ಡಿ. ಕುಮಾರಸ್ವಾಮಿ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಲೋಕಾಯುಕ್ತ ಹಿರಿಯ ಐಪಿಎಸ್ ಅಧಿಕಾರಿ ವಿರುದ್ಧ ಸರಣಿ ದಾಖಲೆಗಳನ್ನು ಬಹಿರಂಗಪಡಿಸಿದರು. ಸಿದ್ದರಾಮಯ್ಯ ಸರ್ಕಾರದಲ್ಲಿ ಯಾವುದೇ ತನಿಖೆ ಪಾರದರ್ಶಕವಾಗಿಲ್ಲ ಎಂದು ಆರೋಪಿಸಿದ ಅವರು, ರಾಜಕೀಯ ಪ್ರೇರಿತವಾಗಿದೆ ಎಂದು ದೂರಿದರು. ಕಳಂಕಿತ ಅಧಿಕಾರಿ ವಿರುದ್ಧ ಕೇಂದ್ರ ಗೃಹ ಸಚಿವಾಲಯಕ್ಕೆ ದೂರು ನೀಡುವುದಾಗಿ ತಿಳಿಸಿದರು.

<><*<><>*><>

ಮುಡಾ ಪ್ರಕರಣದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ರಾಜೀನಾಮೆ ನೀಡುವಂತೆ ಹಾಗೂ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸುವಂತೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಆಗ್ರಹಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಇಂದು ಮಾತನಾಡಿದ ಅವರು, ಮುಖ್ಯಮಂತ್ರಿಯವರ ವಿರುದ್ಧ ಎಫ್‌ಐಆರ್ ದಾಖಲಾಗಿದ್ದು, ಅವರನ್ನು ಬಂಧಿಸುವುದು, ಬಿಡುವುದು ತನಿಖಾ ಸಂಸ್ಥೆಗಳಿಗೆ ಬಿಟ್ಟ ವಿಚಾರವಾಗಿದೆ ಎಂದು ಹೇಳಿದ್ದಾರೆ. ಇನ್ನೊಂದೆಡೆ ಬೆಂಗಳೂರಿನಲ್ಲಿ ಮಾತನಾಡಿದ ಪ್ರತಿಪಕ್ಷ ನಾಯಕ ಆರ್. ಅಶೋಕ, ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಹಾಗೂ ಇತರರ ವಿರುದ್ಧ ಎಫ್‌ಐಆರ್ ದಾಖಲಿಸುವಂತೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಆದೇಶಿಸಿರುವುದಕ್ಕೂ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮುಡಾ ಹಗರಣಕ್ಕೂ ವ್ಯತ್ಯಾಸವಿದೆ ಎಂದು ತಿಳಿಸಿದ್ದಾರೆ. ಕೂಡಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡುವಂತೆ ಒತ್ತಾಯಿಸಿದ್ದಾರೆ.

<><*<><>*><>

ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಜಾಗತಿಕ ಮಟ್ಟದಲ್ಲಿ ಸ್ಪರ್ಧೆ ಮಾಡಬೇಕು” ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದ್ದಾರೆ. ಕನಕಪುರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ನೂತನ ಕಟ್ಟಡಗಳ ಉದ್ಘಾಟನೆ ಮಾಡಿದ ಅವರು ನೀವು ಕೇವಲ ಕನಕಪುರದ ವಿದ್ಯಾರ್ಥಿಗಳಲ್ಲ, ಬೆಂಗಳೂರು ಜಿಲ್ಲೆಯ ಮಕ್ಕಳು ಎಂದು ಹೇಳಿದರು. ಸರ್ಕಾರಿ ಶಾಲೆಯಲ್ಲಿ ಓದುತ್ತಿದ್ದರೂ ಜಾಗತಿಕ ಮಟ್ಟದ ಮಕ್ಕಳೊಂದಿಗೆ ಸ್ಪರ್ಧಿಸಲು ಶ್ರಮವಹಿಸಬೇಕು. ನಿಮ್ಮಲ್ಲಿರುವ ಪ್ರತಿಭೆಯನ್ನು ಗುರುತಿಸಿ ಅದರ ಮೇಲೆ ನಿಮ್ಮ ಜೀವನ ರೂಪಿಸಿಕೊಳ್ಳಿ” ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

<><*<><>*><>

ಕ್ರೀಡಾಪಟುಗಳಿಗೆ ಗೆಲುವು ಮಾತ್ರ ಮುಖ್ಯವಲ್ಲ ಕ್ರೀಡಾ ಮನೋಭಾವದಿಂದ ಸ್ಪರ್ಧೆಯಲ್ಲಿ ಪಾಲ್ಗೊಳ್ಳಬೇಕು ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ್ ಕರೆ ನೀಡಿದ್ದಾರೆ. ಗದಗ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಜರುಗಿದ ಬೆಳಗಾವಿ ವಿಭಾಗ ಮಟ್ಟದ ದಸರಾ ಕ್ರೀಡಾಕೂಟ ಉದ್ಘಾಟಿಸಿ ಮಾತನಾಡಿದ ಅವರು, ಗದಗದ ಮುಳಗುಂದ ಪಟ್ಟಣದಲ್ಲಿ ಈಜುಕೊಳ ನಿರ್ಮಾಣ ಕಾಮಗಾರಿ ಶೀಘ್ರದಲ್ಲಿ ಆರಂಭಿಸಲಾಗುವುದು ಎಂದು ತಿಳಿಸಿದರು. ಕ್ರೀಡಾ ಮನೋಭಾವದಿಂದ ಸ್ಪರ್ಧಿಸುವಂತೆ ಕ್ರೀಡಾ ಪಟುಗಳಿಗೆ ಸಚಿವರು ಶುಭ ಕೋರಿದ್ದಾರೆ.

<><*<><>*><>

ಈ ವರ್ಷವು ಮಡಿಕೇರಿ ದಸರಾ ಉತ್ಸವವನ್ನು ಅದ್ಧೂರಿಯಾಗಿ ನಡೆಸಲು ಸಿದ್ಧತೆ ಮಾಡಿಕೊಳ್ಳಲಾಗಿದೆ. ಅಕ್ಟೋಬರ್, ೩ ರಿಂದ ೧೨ ರವರೆಗೆ ನಡೆಯುವ ೨೦೨೪ ರ ದಸರಾ ಉತ್ಸವದ ಪ್ರಯುಕ್ತ ಮಡಿಕೇರಿ ನಗರದ ಜನರ ಹಾಗೂ ಪ್ರವಾಸಿಗರ ಆಕರ್ಷಣೆಗೆ ಒತ್ತು ನೀಡಲು ಮಡಿಕೇರಿ ನಗರದಲ್ಲಿನ ವಾಣಿಜ್ಯ ಮಳಿಗೆಗಳ ಕಟ್ಟಡಕ್ಕೆ, ಹೋಟೆಲ್‌ಗಳಿಗೆ ಹಾಗೂ ಇತರೆ ಕಟ್ಟಡಗಳಿಗೆ ಆಕರ್ಷಕವಾಗಿ ವಿದ್ಯುತ್ ದೀಪಾಲಂಕಾರ ಮಾಡಲು ನಿರ್ಧರಿಸಲಾಗಿದೆ. ದಸರಾ ಉತ್ಸವವನ್ನು ಅದ್ದೂರಿಯಾಗಿ ನಡೆಸಲು ಸಹಕಾರ ನೀಡುವಂತೆ ಮಡಿಕೇರಿ ನಗರದ ವಾಣಿಜ್ಯ ಹೋಟೆಲ್ ಕಟ್ಟಡ ಹಾಗೂ ಇತರೆ ಕಟ್ಟಡದ ಮಾಲಿಕರು ಮತ್ತು ವರ್ತಕರಿಗೆ ಸೂಚಿಸಲಾಗಿದೆ ಎಂದು ನಗರಸಭೆ ಪೌರಾಯುಕ್ತ ರಮೇಶ್ ಮಾಹಿತಿ ನೀಡಿದ್ದಾರೆ.

<><*<><>*><>

ಮಹಿಷ ದಸರಾದ ಹಿನ್ನೆಲೆ ನಾಳೆ ಬೆಳಗ್ಗೆ ಮೈಸೂರಿನ ಚಾಮುಂಡಿ ಬೆಟ್ಟದಲ್ಲಿನ ಮಹಿಷಾಸುರನ ಪ್ರತಿಮೆಗೆ ಪುಷ್ಪಾರ್ಚನೆ ಕಾರ್ಯಕ್ರಮ ನಡೆಯಲಿದೆ. ಪುರ ಭವನದ ಹೊರಾವರಣದಲ್ಲಿ ಮಹಿಷ ಮಂಡಲೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಹಾಗೂ ಸಾರ್ವಜನಿಕ ಹಿತದೃಷ್ಟಿಯಿಂದ ಮೈಸೂರು ನಗರದ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯಲ್ಲಿನ ಚಾಮುಂಡಿ ಬೆಟ್ಟ ಸೇರಿದಂತೆ ಮೈಸೂರಿನಲ್ಲಿ ಇಂದಿನಿಂದ ಇದೇ ೩೦ರವರೆಗೆ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ಈ ಸಂದರ್ಭದಲ್ಲಿ ಯಾವುದೇ ಮೆರವಣಿಗೆ ಪ್ರತಿಭಟನೆ ರ್ಯಾಲಿ, ಬೈಕ್ ರ್ಯಾಲಿ ನಡೆಸುವುದು, ಪರ-ವಿರೋಧ ಘೋಷಣೆ ಕೂಗುವುದು, ಪಟಾಕಿ ಸಿಡಿಸಿ ಸಂಭ್ರಮಾಚರಣೆ ನಡೆಸುವುದು ನಿಷೇಧಿಸಲಾಗಿದೆ. ಈ ಆದೇಶವನ್ನು ಉಲ್ಲಂಘಿಸಿದಲ್ಲಿ ಕಾನೂನು ಕ್ರಮಕೈಗೊಳ್ಳಲಾಗುತ್ತದೆ ಎಂದು ಜಿಲ್ಲಾ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**<><*<><>*><>**

<u>ಇನ್ನು ಸಂಕ್ಷಿಪ್ತ ಸುದ್ದಿಗಳು</u>

೧. ಮಲ್ಪೆ-ತೀರ್ಥಹಳ್ಳಿ ರಾಷ್ಟ್ರೀಯ ಹೆದ್ದಾರಿ-೧೬೯ ಎ ಚತುಷ್ಪಥ ಯೋಜನೆಯಲ್ಲಿ, ಆಗುಂಬೆ ಘಾಟ್‌ನಲ್ಲಿ ಸುರಂಗ ಮಾರ್ಗ ನಿರ್ಮಾಣದ ಕಾರ್ಯ ಸಾಧ್ಯತೆಯ ಕುರಿತಂತೆ ವರದಿ ಸಲ್ಲಿಸಲು, ಕೇಂದ್ರ ಭೂ ಸಾರಿಗೆ ಸಚಿವಾಲಯ ಹೆದ್ದಾರಿ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದೆ ಎಂದು ಸಂಸದ ಬಿ.ವೈ.ರಾಘವೇಂದ್ರ ಶಿವಮೊಗ್ಗದಲ್ಲಿಂದು ತಿಳಿಸಿದ್ದಾರೆ.

೨. ಗುರುಮಿತಕಲ್ ಕ್ಷೇತ್ರದ ಅಭಿವೃದ್ಧಿಗೆ ಆದ್ಯತೆಯಲ್ಲಿ ಕೆಲಸ ಮಾಡಲಾಗುತ್ತದೆ ಎಂದು ಮತಕ್ಷೇತ್ರದ ಶಾಸಕ ಶರಣಗೌಡ ಕಂದಕೂರ ಯಾದಗಿರಿಯಲ್ಲಿಂದು ತಿಳಿಸಿದ್ದಾರೆ.

೩. ಮೂಲಭೂತ ಸೌಲಭ್ಯಗಳನ್ನು ಒದಗಿಸಬೇಕು ಹಾಗೂ ಮೊಬೈಲ್ ಆಪ್‌ಗಳಲ್ಲಿ ಕೆಲಸ ಮಾಡುವಂತೆ ಹೇರಲಾಗುತ್ತಿರುವ ನಿರಂತರ ಒತ್ತಡವನ್ನು ನಿಲ್ಲಿಸುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ಗ್ರಾಮ ಆಡಳಿತ ಅಧಿಕಾರಿಗಳ ಸಂಘದ ಚಿಕ್ಕಬಳ್ಳಾಪುರ ಜಿಲ್ಲಾ ಘಟಕ ನಡೆಸುತ್ತಿರುವ ಅನಿರ್ದಿಷ್ಟಾವಧಿ ಧರಣಿ ಇಂದು ಮೂರನೇ ದಿನಕ್ಕೆ ಕಾಲಿಟ್ಟಿದೆ.

೪. ಕೊಡಗು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ಕೊಡಗು ಜಿಲ್ಲಾ ಪೊಲೀಸ್ ಇಲಾಖೆ ಸಂಯುಕ್ತಾಶ್ರಯದಲ್ಲಿ ಕುಶಾಲನಗರ ಕಲಾಭವನದಲ್ಲಿ ಗೀತ ಗಾಯನ ನಡೆಯಿತು.

೫. ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳ ಅಭಿವೃದ್ಧಿಗೆ ಅಖಂಡ ಬಳ್ಳಾರಿ ಜಿಲ್ಲೆಯ ಜನರ ಸಹಕಾರ ಮುಖ್ಯ ಎಂದು ಸಂಸದ ಈ ತುಕಾರಾಂ ತಿಳಿಸಿದ್ದಾರೆ.

೬. ರಾಜ್ಯದ ವಿವಿಧ ಸರ್ಕಾರಿ ಇಲಾಖೆಗಳಲ್ಲಿ ನಿವೃತ್ತರಾದ ನೌಕರರಿಗೆ ೭ನೇ ವೇತನ ಆಯೋಗದಡಿ ನಿವೃತ್ತಿ ಆರ್ಥಿಕ ಸೌಲಭ್ಯ ನೀಡುವಂತೆ ಒತ್ತಾಯಿಸಿ ಧರಣಿ ನಡೆಸಲು ಕರ್ನಾಟಕ ನಿವೃತ್ತ ನೌಕರರ ವೇದಿಕೆಯ ರಾಜ್ಯ ಮಹಾ ಪ್ರಧಾನ ಸಂಚಾಲಕ ಷಣ್ಮುಖಯ್ಯ ತಿಳಿಸಿದ್ದಾರೆ.

೭. ಚಿತ್ರದುರ್ಗ ಲೋಕಸಭಾ ಸಂಸದ ಗೋವಿಂದ ಕಾರಜೋಳ ಅವರನ್ನು ಗಣಿ, ಉಕ್ಕು ಮತ್ತು ಕಲ್ಲಿದ್ದಲು ಇಲಾಖೆಯ ಸ್ಥಾಯಿ ಸಮಿತಿ ಸದಸ್ಯರನ್ನಾಗಿ ಮಾಡಿ ಲೊಕಸಭಾ ಸಭಾಪತಿ ಓಂ ಬಿರ್ಲಾ ಆದೇಶಿಸಿದ್ದಾರೆ.

೮. ಯಾದಗಿರಿ ಜಿಲ್ಲೆಯಲ್ಲಿ ನಾಳೆ ಗ್ರಾಮ ಆಡಳಿತ ಅಧಿಕಾರಿ ನೇರ ನೇಮಕಾತಿ ಪರೀಕ್ಷೆ ಪಾರದರ್ಶಕವಾಗಿ ನಡೆಯುವಂತೆ ನೋಡಿಕೊಳ್ಳಲು ಅಪರ ಜಿಲ್ಲಾಧಿಕಾರಿ ಶರಣಬಸಪ್ಪ ಕೊಟೆಪ್ಪಗೋಳ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

**<><*<>** ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು **<>*><>**